# ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಂಡ್ಯ.

## ಆಡಳಿತ ಸಹಾಯಕ ಹುದ್ದೆಯ ನೇಮಕಾತಿ ಪ್ರಕಟಣೆ

ಮಾನ್ಯ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ರವರ ಪತ್ರ ಸಂಖ್ಯೆ 03/ಎಡಿಎಂ/2007 ದಿನಾಂಕ 04.08.15 ರ ಅನ್ವಯ ತಾಲ್ಲೂಕು ಕಾನೂನು ಸೇವಾ ಸಮಿತಿ, ಶ್ರೀರಂಗಪಟ್ಟಣ ಕಛೇರಿಯಲ್ಲಿ ಖಾಲಿ ಇರುವ ಆಡಳಿತ ಸಹಾಯಕ ಹುದ್ದೆಯನ್ನು ತಾತ್ಕಾಲಿಕ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಅಹ್ವಾನಿಸಲಾಗಿದೆ.

ಆಡಳಿತ ಸಹಾಯಕರ ಹುದ್ದೆಗಳ ಸಂಖ್ಯೆ : 01

ತಾಲ್ಲೂಕು ಕಾನೂನು ಸೇವಾ ಸಮಿತಿ, ಶ್ರೀರಂಗಪಟ್ಟಣ.

ಅರ್ಹತೆಗಳು :-

೧. ಮೇಲ್ಕಂಡ ಹುದ್ದೆಗೆ ನಿವೃತ್ತ ಸರ್ಕಾರಿ ನೌಕರರಿಗೆ ಮೊದಲನೇ ಆದ್ಯತೆ ನೀಡಲಾಗುವುದು, ಒಂದು ವೇಳೆ ನಿವೃತ ಸರ್ಕಾರಿ ನೌಕರರು ಲಭ್ಯವಿಲ್ಲದಿದ್ದಲ್ಲಿ ಇತರೆ ಅಭ್ಯರ್ಥಿಗಳಿಗೆ ಅವಕಾಶ ನೀಡಲಾಗುವುದು ಹಾಗೂ ಸ್ಥಳೀಯ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

೨. ಎಸ್.ಎಸ್.ಎಲ್.ಸಿ ಉತ್ತೀರ್ಣತೆ ಹೊಂದಿರಬೇಕು.

ಮಾಸಿಕ ಗೌರವಧನ/ವೇತನ :-

ತಾಲ್ಲೂಕು ಕಾನೂನು ಸೇವಾ ಸಮಿತಿ, ಶ್ರೀರಂಗಪಟ್ಟಣದಲ್ಲಿ ಕಾರ್ಯ ನಿರ್ವಹಿಸುವ ಆಡಳಿತ ಸಹಾಯಕರಿಗೆ ಮಾಸಿಕ 5000/- (ಐದು ಸಾವಿರ ರೂಪಾಯಿಗಳು ಮಾತ್ರ) ಗೌರವಧನ ನೀಡಲಾಗುವುದು.

ನೇಮಕಾತಿ ಅವಧಿ:-

ಸದರಿ ಹುದ್ದೆಯ ನೇಮಕಾತಿಯು ಒಂದು ವರ್ಷದ ಅವಧಿಗೆ ಪೂರ್ಣ ಪ್ರಮಾಣದಲ್ಲಿ ತಾತ್ಕಾಲಿಕ ನೇಮಕಾತಿಯಾಗಿದ್ದು, ಮಾನ್ಯ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ರವರು ಕಾಲಕಾಲಕ್ಕೆ ಹೊರಡಿಸಬಹುದಾದ ನಿರ್ದೇಶನಗಳನ್ನು ಪಾಲಿಸಲಾಗುವುದು.

ಅರ್ಜಿ ಸಲ್ಲಿಸಬೇಕಾದ ವಿಳಾಸ:-

ಅಧ್ಯಕ್ಷರು,<br>
ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ,<br>
(ನ್ಯಾಯಾಲಯದ ಆವರಣ), ಮಂಡ್ಯ.

**ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : 07.01.2017 ಸಂಜೆ 05.00 ಗಂಟೆಗೆ.**

06.12.2016

ಅಧ್ಯಕ್ಷರು,<br>
ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ,<br>
ಮಂಡ್ಯ.